# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಎನ್.ಎಸ್ ಶಿವಲಿಂಗಯ್ಯ, ಕಾರ್ಯದರ್ಶಿ, ಕುಪ್ಪಾಳು ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ. ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/517/ಗ್ರಾಪಂಕಾ/2016 ದಿನಾಂಕ:27.09.2016.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-2/DE-587/2016/ARE-8 Date:29.01.2018
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE-587/2016/ARE-8 Date:31.01.2018

<u>ಪ್ರಸ್ತಾವನೆ :</u>

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶದಲ್ಲಿ ಶ್ರೀ ಎನ್.ಎಸ್ ಶಿವಲಿಂಗಯ್ಯ, ಕಾರ್ಯದರ್ಶಿ, ಕುಪ್ಪಾಳು ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ನಿಬಂಧಕರು ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

<u>"ದೋಷಾರೋಪಣೆ"</u>

"ಶ್ರೀ ಎನ್.ಎಸ್ ಶಿವಲಿಂಗಯ್ಯ, ಕಾರ್ಯದರ್ಶಿ, ಕುಪ್ಪಾಳು ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ ರವರು ಕೆಲಸ ನಿರ್ವಹಿಸುತ್ತಿದ್ದಾಗ ದಿನಾಂಕ:01.04.2013 ರಿಂದ 31,03..2014 ರ ವರೆಗೆ ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕೆಲಸ ಮಾಡುತ್ತಿದ್ದಾಗ, ಸುಮಾರು 6 ರಿಂದ 8 ಲಕ್ಷದ ಹಣವನ್ನು ಯಾವುದೇ ವೋಚರ್‌ಗಳಿಲ್ಲದೇ, ಸ್ವಂತ ಚೆಕ್‌ನಲ್ಲಿಯೇ ಕುಡಿಯುವ ನೀರು ಮತ್ತು ಆಡಳಿತ ವೆಚ್ಚ ನೆಪತೋರಿಸಿ, ಹಣ ಡ್ರಾ ಮಾಡಿರುತ್ತಾರೆ. ಸಿಬ್ಬಂದಿಗೂ ವೇತನ ನೀಡದೇ ಸಾರ್ವಜನಿಕ ಹಣ ದುರುಪಯೋಗ ಪಡಿಸಿಕೊಂಡಿರುತ್ತಾರೆ. ಕೊಟ್ಟಿಗೇಹಳ್ಳಿ ಗ್ರಾಮದ ಸರ್ವೆ ನಂ.34 ಕ್ಷೇತ್ರ 1ಎ, 18 ಗುಂಟೆಯನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಿದ್ದು, ಆದರೆ ಇದನ್ನು ಅಕ್ರಮವಾಗಿ ಗ್ರಾಮ ಪಂಚಾಯಿತಿ ಸದಸ್ಯರಾದ ಷಣ್ಮುಗಸ್ವಾಮಿ ಕುಟುಂಬಕ್ಕೆ ಖಾತೆ ಮಾಡಿಕೊಟ್ಟಿದ್ದಾರೆ. ಆದ್ದರಿಂದ ಸಾರ್ವಜನಿಕರಿಗೆ ನ್ಯಾಯ ಒದಗಿಸಬೇಕೆಂದು ಕೇಳಿಕೊಂಡಿದ್ದಾರೆ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲಿಶ್ರೀ ಶಿವಲಿಂಗಯ್ಯ, ಕಾರ್ಯದರ್ಶಿ, ಕುಪ್ಪಾಳು ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ. ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಉಪಲೋಕಾಯುಕ್ತರು ಅಂಗೀಕರಿಸಿ "ಶ್ರೀ ಶಿವಲಿಂಗಯ್ಯ, ಕಾರ್ಯದರ್ಶಿ, ಕುಪ್ಪಾಳು ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ ರವರು ಕೆಲಸ ನಿರ್ವಹಿಸುತ್ತಿದ್ದಾಗ ದಿನಾಂಕ:01.04.2013 ರಿಂದ 31,03..2014 ರ ವರೆಗೆ ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕೆಲಸ ಮಾಡುತ್ತಿದ್ದಾಗ, ಸುಮಾರು 6 ರಿಂದ 8 ಲಕ್ಷದ ಹಣವನ್ನು ಯಾವುದೇ ವೋಚರ್‌ಗಳಿಲ್ಲದೇ, ಸ್ವಂತ ಚೆಕ್‌ನಲ್ಲಿಯೇ ಕುಡಿಯುವ ನೀರು ಮತ್ತು ಆಡಳಿತ ವೆಚ್ಚ ನೆಪತೋರಿಸಿ, ಹಣ ಡ್ರಾ ಮಾಡಿರುತ್ತಾರೆ. ಸಿಬ್ಬಂದಿಗೂ ವೇತನ ನೀಡದೇ ಸಾರ್ವಜನಿಕ ಹಣ ದುರುಪಯೋಗ ಪಡಿಸಿಕೊಂಡಿರುತ್ತಾರೆ. ಕೊಟ್ಟಿಗೇಹಳ್ಳಿ ಗ್ರಾಮದ ಸರ್ವೆ ನಂ.34 ಕ್ಷೇತ್ರ 1ಎ, 18 ಗುಂಟೆಯನ್ನು ಸಾರ್ವಜನಿಕ ಉದ್ದೇಶಕ್ಕಾಗಿ

ಮೀಸಲಿರಿಸಿದ್ದು, ಆದರೆ ಇದನ್ನು ಅಕ್ರಮವಾಗಿ ಗ್ರಾಮ ಪಂಚಾಯಿತಿ ಸದಸ್ಯರಾದ ಷಣ್ಮುಗಸ್ವಾಮಿ ಕುಟುಂಬಕ್ಕೆ ಖಾತೆ ಮಾಡಿಕೊಟ್ಟಿದ್ದಾರೆ. ಆದ್ದರಿಂದ ಸಾರ್ವಜನಿಕರಿಗೆ ನ್ಯಾಯ ಒದಗಿಸಬೇಕೆಂದು ಕೇಳಿಕೊಂಡಿದ್ದರ ಹಿನ್ನೆಲೆಯಲ್ಲಿ ಸರ್ಕಾರಿ ನೌಕರರಾಗಿದ್ದು ತಮ್ಮ ಕರ್ತವ್ಯ ನಿಷ್ಠೆಯನ್ನು ತೋರದೆ ಕರ್ತವ್ಯಲೋಪ ಎಸಗಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದ ಮೇಲ್ನೋಟಕ್ಕೆ ಕಂಡು ಬರುವುದರಿಂದ ಕೆಸಿಎಸ್(ಸಿಸಿಎ) ನಿಯಮಗಳು 1966 ರ ನಿಯಮ 3(1)(i) to (ii) ರನ್ವಯ ದುರ್ನಡತೆ ಎಸಗಿದ್ದು, ಶಿಸ್ತು ಕ್ರಮಕ್ಕೆ ಭಾದ್ಯರಾಗಿರುವುದು ಕಂಡು ಬಂದಿರುವುದರಿಂದ ಸದರಿಯವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಹಾಗೂ ನಿಯಮ 14-ಎ ಅಡಿ ಇಲಾಖಾ ವಿಚಾರಣೆ ಮಾಡಲು ಲೋಕಾಯುಕ್ತರಿಗೆ ವಹಿಸಲಾಗಿದ್ದು ಮಾನ್ಯ ಉಪಲೋಕಾಯುಕ್ತರು ಸಲ್ಲಿಸಿರುವ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ, ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

The coments filed by the DGO on 15.10.2014 before the Scrutiny Officer. He has stated in his comments that all the relevant documents pertaining to the complaint was furnished to the complainant. The complainant filed his rejoinder as per Ex.P-6. I his rejoinder the complainant has on;y replied that the objections are false. He has mainly concentrated on the allegation that the DGO has made Khata in Sy.no.34 in the name of family members of a member of Grama Panchayath. So far as that allegation is concerned there are absolutely no documents to show that Khata has been made in the name of any of the members of the family of Gram Panchayath member. Further, there is also no Article of Charge framed regarding that allegation, So far as the allegations mentioned in the AOC are concerned the DGO has produced relevant documents which are marked as Ex.D-15 and D-16. In the comments the DGO has mentioned that he has maintained all the records. It is not the case of the Disciplinary Authority that the DGO failed to produce the documents, vouchers receipts ets., even after directing him to produce the same. It is not the charge that the DGO failed to produce them inspite of asking him to produce them. DGO has now produced all the relevant documents pertaining to the work carried out during the relevNT Period. Hence, the allegation that the DGO has not maintained vouchers or documents is not substantiated. Further, there is no evidence or materials to show that the DGO has misappropriated the amount sanctioned for the works under the NAREGA Scheme.

For the aforesaid reasons, I am of the opinion that the Displinary Authority failed to prove the charge against the DGO. Hence. Displinary Authority has not proved the charges leveled against the DGO.

ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಅಲ್ಲಗಳೆದಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತಾರೆ.

The DGO Sri Shivalingaiah N.S, Secretary, Kuppalu Grama Panchayath, Tiptur Taluk, Tumkur District be dropped as not proved.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಎನ್.ಎಸ್ ಶಿವಲಿಂಗಯ್ಯ, ಕಾರ್ಯದರ್ಶಿ, ಕುಪ್ಪಾಳು ಗ್ರಾಮ ಪಂಚಾಯಿತಿ, ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಆಪಾದಿತರಿಗೆ

ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಸದರಿಯವರ ವಿರುದ್ಧದ ಪ್ರಕರಣವು ಸಾಭೀತಾಗದೆ ಇರುವುದರಿಂದ ಸದರಿ ಪ್ರಕರಣವನ್ನು ಕೈಬಿಟ್ಟು ಮುಕ್ತಾಯಗೊಳಿಸುವಂತೆ ಆದೇಶಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:517:ಗ್ರಾಪಂಕಾ2016 ಬೆಂಗಳೂರು, ದಿನಾಂಕ-11-04-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಎನ್.ಎಸ್ ಶಿವಲಿಂಗಯ್ಯ, ಕಾರ್ಯದರ್ಶಿ, ಕುಪ್ಪಾಳು ಗ್ರಾಮ ಪಂಚಾಯಿತಿ, ಇವರ ವಿರುದ್ಧದ ಪ್ರಕರಣವು ಸಾಭೀತಾಗದೆ ಇರುವುದರಿಂದ ಸದರಿಯವರ ವಿರುದ್ಧದ ಪ್ರಕರಣವನ್ನು ಕೈಬಿಟ್ಟು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

11/4

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

11/04

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ.
6. ಶ್ರೀ ಎನ್.ಎಸ್ ಶಿವಲಿಂಗಯ್ಯ, ಕಾರ್ಯದರ್ಶಿ, ಕುಪ್ಪಾಳು ಗ್ರಾಮ ಪಂಚಾಯಿತಿ, ತಿಪಟೂರು ತಾಲ್ಲೂಕು, ತುಮಕೂರು ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.